<u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ:- ಶ್ರೀ ಬಿ. ಜಗದೇವಪ್ಪ ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಚಿಂಚೋಳಿ, ಕಲಬುರಗಿ ಜಿಲ್ಲೆ, ಇವರ ವಿರುದ್ಧದ ಶಿಸ್ತು ಕ್ರಮ- ಅಂತಿಮ ಆದೇಶ.

ಓದಲಾಗಿದೆ: 1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತಿ, ಗುಲ್ಬರ್ಗಾ ಇವರ ಪತ್ರ ಸಂಖ್ಯೆ:ಜಿಪಗು/ಆಡಳಿತ/ವಿಚಾರಣೆ/117/2011-12/1889 ದಿ 31.12.2013.

2) ಸರ್ಕಾರದ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ 93 ವಿಸೇಬಿ 2012 ದಿ:10-12-2014.

3) ಶ್ರೀ ಬಿ. ಜಗದೇವಪ್ಪ ಇವರ ಲಿಖಿತ ಹೇಳಿಕೆ ದಿ 18-03-2014

4) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 93 ವಿಸೇಬಿ 2012 ದಿ 24.05.2014.

5) ವಿಚಾರಣಾಧಿಕಾರಿಯವರ ವರದಿ ದಿ 30.09.2014.

6) ಎರಡನೇ ಕಾರಣ ಕೇಳುವ ನೋಟೀಸ್ ದಿ 09.04.2015.

7) ಶ್ರೀ ಬಿ. ಜಗದೇವಪ್ಪ ಇವರ ಲಿಖಿತ ಹೇಳಿಕೆ ದಿ:30-04-2015

-------

<u>ಪ್ರಸ್ತಾವನೆ:</u>

ಶ್ರೀ ಬಿ. ಜಗದೇವಪ್ಪ,, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಗುಲ್ಬರ್ಗಾ ಇವರು ಸದರಿ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಚಿಂಚೋಳಿ ತಾಲ್ಲೂಕು ಪಂಚಾಯತಿಯಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿಯ ಕಾಮಗಾರಿಗಳ ಅನುಷ್ಠಾನಗೊಳಿಸಲು ಗ್ರಾಮ ಪಂಚಾಯತಿಗಳಿಗೆ ಅನುದಾನ ಬಿಡುಗಡೆ ಮಾಡುವಾಗ ಸರ್ಕಾರದ ಮಾರ್ಗಸೂಚಿ ನಿಬಂಧನೆಗಳನ್ನು ಮತ್ತು ಮೇಲಾಧಿಕಾರಿಗಳ ಆದೇಶ ಮತ್ತು ನಿರ್ದೇಶನಗಳನ್ನು ಪಾಲಿಸದೇ ಇರುವುದು, 2011-12ನೇ ಸಾಲಿನಲ್ಲಿ ಸಂಪೂರ್ಣ ಸ್ವಚ್ಛತಾ ಆಂದೋಲನಾ ಕಾಮಗಾರಿ ಅನುಷ್ಠಾನದಲ್ಲಿ ಸರ್ಕಾರದ ಮಾರ್ಗಸೂಚಿ ನಿಬಂಧನೆಗಳನ್ನು ಹಾಗೂ ಮೇಲಾಧಿಕಾರಿಗಳ ಆದೇಶ ಮತ್ತು ನಿರ್ದೇಶನಗಳನ್ನು ಪಾಲಿಸದೆ ಅನುದಾನ ಬಿಡುಗಡೆ ಮಾಡಿರುವುದು, ಸ್ವರ್ಣ ಜಯಂತಿ ಗ್ರಾಮ ಸ್ವರಾಜ ಯೋಜನೆ ಅಡಿಯಲ್ಲಿ ಆಯ್ಕೆಯಾಗದ ಸಂಘ ಸಂಸ್ಥೆಗಳಿಗೆ ಕ್ರಿಯಾ ಯೋಜನೆಯಲ್ಲಿ ಅನುಮೋದನೆ ಆಗದ ಸಂಸ್ಥೆಗಳಿಗೆ ಸರ್ಕಾರದ ಮಾರ್ಗಸೂಚಿ ನಿಬಂಧನೆಗಳನ್ನು ಮತ್ತು ಮೇಲಾಧಿಕಾರಿಗಳ ಆದೇಶ ಮತ್ತು ನಿರ್ದೇಶನಗಳನ್ನು ಪಾಲಿಸದೆ ನಿಯಮಭಾಹಿರವಾಗಿ ಅನುದಾನ ಬಿಡುಗಡೆ ಮಾಡಿರುವುದು, ಗ್ರಾಮ ಸ್ವರಾಜ ಯೋಜನೆ ಸಾಮರ್ಥ್ಯ ಸೌಧ ಕೇಂದ್ರಕ್ಕೆ ಅವಶ್ಯವಿರುವ ಪೀಠೋಪಕರಣ ಮತ್ತು ಇತರೆ ಪರಿಕರಣೆಗಳನ್ನು ಖರೀದಿಸುವ ಪ್ರಕ್ರಿಯೆ ಮಾರ್ಚ್-2012ರ ಒಳಗಾಗಿ ನಿಯಮಾನುಸಾರ ಪೂರ್ಣಗೊಳಿಸಲು ಸರ್ಕಾರದ ಆದೇಶ ದಿನಾಂಕ: 18-12-2012 ರಲ್ಲಿ ನಿರ್ದೇಶನ ನೀಡಿ, ಮುಖ್ಯ ಲೆಕ್ಕಾಧಿಕಾರಿಗಳು ಜಿಲ್ಲಾ ಪಂಚಾಯತ ಗುಲಬರ್ಗಾ ರವರು ಚಿಂಚೋಳಿ ತಾಲೂಕಿಗೆ ರೂ. 1,82,400/- ಅನುದಾನ ಬಿಡುಗಡೆ ಮಾಡಿರುತ್ತಾರೆ. ಅದರೆ ಸದರಿ ಪೀಠೋಪಕರಣಗಳನ್ನು ಖರೀದಿಸುವ ಸಂಬಂಧವಾಗಿ ಕೆ.ಟಿ.ಟಿ.ಪಿ. ಕಾಯ್ದೆ ಅಡಿ ಟೆಂಡರ ಕರೆಯದೇ ಕೇವಲ ದರಪಟ್ಟಿ ಮೂಲಕ ಖರೀದಿಸಿದ್ದು 2011-12ನೇ ಯೋಜನೆ ಆಗಿದ್ದು ಇದುವರೆಗೂ ಪೀಠೋಪಕರಣ ಸರಬರಾಜು ಆಗದಿರುವುದು, ವಸತಿ ಯೋಜನೆ ಅಡಿ ಬರುವ ಬಸವ ವಸತಿ ಯೋಜನೆ, ಇಂದಿರಾ ಆವಾಸ ಯೋಜನೆ, ಗ್ರಾಮೀಣ ಅಂಬೇಡ್ಕರ ವಸತಿ, ಎಸ್.ಡಿ.ಪಿ. ಎಲ್ಲಾ ಯೋಜನೆಗಳಲ್ಲಿ ಆರ್.ಜಿ.ಆರ್.ಜಿ.ಸಿ.ಎಲ್. ಬೆಂಗಳೂರು ರವರಿಂದ ಅನುಮೋದಿತವಾದ ಗುರಿಯಂತೆ ಚಿಂಚೋಳಿ ತಾಲೂಕಿಗೆ ಸಂಬಂಧಿಸಿದ ಗುರಿಯನ್ನು ಸಾಧಿಸುವಲ್ಲಿ

ವಿಫಲರಾಗಿದ್ದು ಇತ್ಯಾದಿ ಆರೋಪಗಳಲ್ಲಿ ಕರ್ತವ್ಯ ಲೋಪವೆಸಗಿರುವ ಕುರಿತು ಶಿಸ್ತು ಕ್ರಮ ಜರುಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತಿ ಗುಲ್ಬರ್ಗಾ ಇವರು ಮೇಲೆ ಕ್ರಮ ಸಂಖ್ಯೆ(1) ರಲ್ಲಿ ಓದಲಾದ ದಿನಾಂಕ:31-12-2013ರ ಪತ್ರದಲ್ಲಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದರು.

ಪ್ರಸ್ತಾವನೆಯನ್ನು ಪರಿಶೀಲಿಸಿ, ಶ್ರೀ ಬಿ. ಜಗದೇವಪ್ಪ ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಚಿಂಚೋಳಿ ಇವರು ಎಸಗಿರುವ ಕರ್ತವ್ಯಲೋಪಗಳ ಬಗ್ಗೆ ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳ 1957ರ ನಿಯಮ 11 ರಡಿ ಶಿಸ್ತು ಕ್ರಮ ಜರುಗಿಸಲು ಉದ್ದೇಶಿಸಿ, ಕಾರಣ ಕೇಳುವ ನೋಟೀಸಿನೊಂದಿಗೆ ದೋಷಾರೋಪಣ ಪಟ್ಟಿಯ ಅನುಬಂಧ-1 ರಿಂದ 4 ನ್ನು ಮೇಲೆ ಓದಲಾದ ಕ್ರಮ ಸಂಖ್ಯೆ(2) ರಲ್ಲಿ ಜಾರಿ ಮಾಡಲಾಗಿತ್ತು. ಸದರಿ ನೋಟೀಸಿಗೆ ಆರೋಪಿತ ಅಧಿಕಾರಿಯು ಮೇಲೆ ಓದಲಾದ ಕ್ರಮ ಸಂಖ್ಯೆ(3) ರಲ್ಲಿ ಲಿಖಿತ ಹೇಳಿಕೆಯನ್ನು ಸಲ್ಲಿಸುತ್ತಾ, ಅವರ ವಿರುದ್ಧದ ಆರೋಪಗಳನ್ನು ನಿರಾಕರಿಸಿ ಆರೋಪಗಳಿಂದ ದೋಷಮುಕ್ತಗೊಳಿಸಬೇಕೆಂದು ಕೋರಿರುತ್ತಾರೆ. ಸರ್ಕಾರವು ಸದರಿಯವರ ಲಿಖಿತ ಹೇಳಿಕೆಯನ್ನು ಪರಿಶೀಲಿಸಿ, ಅದು ಸಮರ್ಥನೀಯವಾಗಿರುವುದಿಲ್ಲವೆಂಬ ಕಾರಣಕ್ಕೆ ಸದರಿ ಅಧಿಕಾರಿ ವಿರುದ್ಧದ ಆರೋಪಗಳ ಸತ್ಯಾಸತ್ಯತೆಯನ್ನು ಕಂಡು ಹಿಡಿಯಲು ಕೂಲಂಕಷ ಇಲಾಖಾ ವಿಚಾರಣೆಯನ್ನು ಜರುಗಿಸಲು ನಿರ್ಧರಿಸಿ, ಮೇಲೆ ಓದಲಾದ ಕ್ರ.ಸಂ.(4)ರ ದಿನಾಂಕ 24.05.2015ರ ಆದೇಶದಲ್ಲಿ ವಿಚಾರಣಾಧಿಕಾರಿಯಾಗಿ ಶ್ರೀ ಡಿ.ವಿ.ಶೇಟ್, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಇವರನ್ನು ನೇಮಿಸಲಾಗಿತ್ತು.

ಮೇಲೆ ಓದಲಾದ ಕ್ರ.ಸಂ.(5)ರ ದಿನಾಂಕ 30.09.2014 ರಂದು ವಿಚಾರಣಾಧಿಕಾರಿಯವರು ಸರ್ಕಾರಕ್ಕೆ ಸಲ್ಲಿಸಿರುವ ವಿಚಾರಣಾ ವರದಿಯಲ್ಲಿ ಶ್ರೀ ಬಿ. ಜಗದೇವಪ್ಪ ಇವರ ವಿರುದ್ಧ ಮಾಡಿರುವ ಆರೋಪಗಳನ್ನು ರುಜುವಾತುಪಡಿಸಲು ಶಿಸ್ತು ಪ್ರಾಧಿಕಾರ ವಿಫಲವಾಗಿದೆ ಎಂದು ತಿಳಿಸಿರುತ್ತಾರೆ. ಆದರೆ, ಸರ್ಕಾರವು ವಿಚಾರಣಾಧಿಕಾರಿಯವರ ನಿರ್ಣಯವನ್ನು ಒಪ್ಪದೆ, ಅವರ ವಿರುದ್ಧ ಮಾಡಲಾದ ಆರೋಪಗಳ ಬಗ್ಗೆ ಮೇಲೆ ಓದಲಾದ ಕ್ರ.ಸಂ.(6)ರ ದಿನಾಂಕ 09.04.2015ರಲ್ಲಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮೇಲ್ಮನವಿ) ನಿಯಮ 1957ರ ನಿಯಮ 11(ಎ)ರಡಿಯುಲ್ಲಿ ಎರಡನೇ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲಾಗಿತ್ತು. ಶ್ರೀಯುತರು ಸದರಿ ನೋಟೀಸಿಗೆ ಮೇಲೆ ಓದಲಾದ ಕ್ರ.ಸಂ.(7)ರ ದಿನಾಂಕ 30.04.2015ರ ಪತ್ರದಲ್ಲಿ ಲಿಖಿತ ಹೇಳಿಕೆಯನ್ನು ಸಲ್ಲಿಸಿ, ತಮ್ಮ ವಿರುದ್ಧದ ಆರೋಪಗಳನ್ನು ನಿರಾಕರಿಸಿ ಆರೋಪಗಳಿಂದ ದೋಷಮುಕ್ತಗೊಳಿಸಬೇಕೆಂದು ಕೋರಿರುತ್ತಾರೆ.

ಅಪಾದಿತ ಅಧಿಕಾರಿ ವಿರುದ್ಧ ಮಾಡಲಾಗಿರುವ ಆರೋಪದಲ್ಲಿ ಕ್ರ.ಸಂ:4ರ ಆರೋಪದಡಿ ರೂ.1,82,400/-ಗಳ ಪೀಠೋಪಕರಣಗಳನ್ನು ಕೆಟಿಪಿಪಿ ಕಾಯ್ದೆ ಉಲ್ಲಂಘಿಸಿ ದರಪಟ್ಟಿ ಮೂಲಕ ಖರಿದಿಸಿದ್ದು, ಪೀಠೋಪಕರಣ ಸರಬರಾಜು ಆಗದೆ ಹಣ ದುರುಪಯೋಗವಾಗಿದೆಯೆಂದು ಆರೋಪಿಸಿದ್ದು, ಉಳಿದ ಆರೋಪಗಳಲ್ಲಿ ಕೇವಲ ಕರ್ತವ್ಯ ನಿರ್ಲಕ್ಷತೆ ಬಗ್ಗೆ ಆರೋಪಿಸಲಾಗಿದೆ. ಸದರಿ ಆರೋಪದ ಬಗ್ಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕಲಬುರಗಿ ಇವರು ಸರ್ಕಾರಕ್ಕೆ ಸಲ್ಲಿಸಿರುವ ವರದಿಯಲ್ಲಿ ರೂ.1,82,400/-ಗಳ ಪೀಠೋಪಕರಣಗಳನ್ನು ಖರೀದಿಸಿದ್ದು, ಖರೀದಿಸಿದ ಪಿಠೋಪಕರಣಗಳು ಚಿಂಚೋಳಿಯ ಸಾಮರ್ಥ್ಯಸೌದದಲ್ಲಿ ಬಳಕೆಯಲ್ಲಿರುತ್ತವೆ ಮತ್ತು ಹಣದುರುಪಯೋಗವಾಗಿಲ್ಲವೆಂದು ಅಭಿಪ್ರಾಯಪಟ್ಟರುತ್ತಾರೆ.

ಶ್ರೀ ಜಗದೇವಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಚಿಂಚೋಳಿ ಇವರ ವಿರುದ್ಧ ಆರೋಪಕ್ಕೆ ಸಂಬಂಧಿಸಿದಂತೆ ಲಭ್ಯವಿರುವ ವಿಚಾರಣಾ ವರದಿ, ಅಪಾದಿತ ಅಧಿಕಾರಿಯವರ ಲಿಖಿತ ಹೇಳಿಕೆ, ದಾಖಲೆ ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕಲಬುರಗಿ ರವರ ವರದಿಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಲಾಗಿದ್ದು, ಸದರಿಯವರ ವಿರುದ್ಧ ಕ್ರ.ಸಂ.4ರ ಆರೋಪ ಹೊರತುಪಡಿಸಿ ಉಳಿದ ಆರೋಪಗಳು ಕರ್ತವ್ಯ ಲೋಪಕ್ಕೆ ಮಾತ್ರ ಸೀಮಿತವಾಗಿವೆ. ಆದರೆ ಆರೋಪ(4)ರಲ್ಲಿ ಸದರಿಯವರು ಕೆಟಿಪಿಪಿ ಕಾಯ್ದೆ ಉಲ್ಲಂಘಿಸಿ, ರೂ.1,82,400/-ಗಳ ಸಾಮಾಗ್ರಿಗಳನ್ನು ಖರೀದಿಸಿರುವುದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕಲಬುರಗಿ ಇವರ ವರದಿಯಿಂದ ಸ್ಪಷ್ಟವಾಗಿದೆ. ಸದರಿ ಅಧಿಕಾರಿಯವರು ಕೆಟಿಪಿಪಿ ನಿಯಾಮಾನುಸಾರ ಟೆಂಡರ್ ಕರೆದು ಸಾಮಾಗ್ರಿಗಳನ್ನು ಖರೀದಿಸಿರುವುದು ಕಂಡು ಬರುವುದಿಲ್ಲ. ಅದ್ದರಿಂದ ಶ್ರೀ ಜಗದೇವಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಚಿಂಚೋಳಿ ಇವರ ವಿರುದ್ಧ ಸಾಬೀತಾಗಿರುವ ಆರೋಪದ ಗಂಭೀರತೆಗನುಗುಣವಾಗಿ ದಂಡನೆ ವಿಧಿಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 93 ವಿಸೇಬಿ 2012 ಬೆಂಗಳೂರು ದಿನಾಂಕ: 29.02.2016</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಸರ್ಕಾರವು, ಶ್ರೀ ಜಗದೇವಪ್ಪ ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಚಿಂಚೋಳಿ, ಕಲಬುರಗಿ ಜಿಲ್ಲೆ ಇವರ ವಿರುದ್ಧದ ಸಾಬೀತಾದ ಆರೋಪದ ಗಂಭೀರತೆಗೆ ಅನುಗುಣವಾಗಿ ಸದರಿಯವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 8(ii)ರನ್ವಯ **"ವಾಗ್ದಂಡನೆ"** ವಿಧಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

29/2/16

(ಎಸ್. ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ,(ಸೇ-ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:-

1) ಮಹಾಲೇಖಪಾಲರು, (ಎ&ಇ) ಕರ್ನಾಟಕ, ಬೆಂಗಳೂರು.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕಲಬುರಗಿ
3) ಸಂಬಂಧಿಸಿದ ಅಧಿಕಾರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕಲಬುರಗಿ ಇವರ ಮುಖಾಂತರ).

**<u>ಪ್ರತಿಯನ್ನು ಮಾಹಿತಿಗಾಗಿ:-</u>**

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)/ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
2) ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
3) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.